17.07.2015 ರಂದು ಸಾಕ್ಷಿಯನ್ನು ಪುನಃ ಕರೆಸಲಾಯಿತು ಪ್ರಮಾಣವಚನ ಬೋಧಿಸಲಾಯಿತು.
ಮುಖ್ಯ ವಿಚಾರಣೆಃ ಅರ್ಜಿದಾರರ ಪರ ವಕೀಲರಿಂದ

ನಾನು ನನ್ನ ಮುಖ್ಯ ವಿಚಾರಣೆ ಬಾಬ್ತು ಪ್ರಮಾಣ ಪತ್ರವನ್ನು ಸಲ್ಲಿಸಿದ್ದು ಅದರ'ಲ್ಲಿ ಹೇಳಿದ ವಿಚಾರಗಳೆಲ್ಲವೂ ಸತ್ಯವಾಗಿದ್ದು, ಅವುಗಳನ್ನು ನಾನೇ ಹೇಳಿ ಬರೆಯಿಸಿರುತ್ತೇನೆ.

ಕೇಸ್ ಶೀಟನ್ನು ನಿಪಿ 19 ಕ್ಷಕಿರಣವನ್ನು ನಿಪಿ 20 ಎಂದು ಗುರುತಿಸಲಾಯಿತು.

ಪಾಟಿ ಸವಾಲುಃ- ವಕೀಲರಿಂದ ಃ-

ನಾನು ಮುಂದುವರೆದ ಚಿಕಿತ್ಸೆ ನೀಡಿಲ್ಲ ಎಂದರೆ ಸರಿಯಲ್ಲ. ಈ ಬಗ್ಗೆ ದಾಖಲಾತಿ ಹಾಜರು ಪಡಿಸ್ಲಿಲ. ಗಾಯಾಳುವಿನ ಮೂಳೆ ಮುರಿತ ಜೋಡಣೆಯಾಗಿರುತ್ತದೆ ಎಂದರೆ ಸರಿ. ಒಳಉಪಕರಣಗಳನ್ನು ಇನ್ನು ತೆಗೆದಿಲ್ಲ. ಅರ್ಜಿದಾರ ಕೂಲಿ ಕೆಲಸ ಮಾಡುತ್ತಿದ್ದಾನೆ. ವೆಲ್ಡಿಂಗ್ ಕೆಲಸ ಮಾಡಲು ತೊಂದರೆ ಇಲ್ಲ ಎಂದರೆ ಸರಿಯಲ್ಲ. ಚಲನವಲನಗಳ ಬಗ್ಗೆ ತೊಂದರೆ ಇಲ್ಲ ಎಂದರೆ ಸರಿಯಲ್ಲ. ನಾನು ಎಸ್ಟೀಮೇಟ್ ಹಾಜರು ಪಡಿಸಿಲ್ಲ. ಹೆಚ್ಚಿನ ಪರಿಹಾರ ಸಿಗುವ ಸಲುವಾಗಿ ಹೆಚ್ಚಿನ ನ್ಯೂನ್ಯತಾ ಪ್ರಮಾಣವನ್ನು ಹೇಳಿರುತ್ತೇನೆ ಎಂದರೆ ಸರಿಯಲ್ಲ. ನಾನು ನಿರ್ದರಿಸಿರುವಷ್ಟು ನ್ಯೂನ್ಯತೆಯು ಬರುವುದಿಲ್ಲ ಎಂದರೆ ಸರಿಯಲ್ಲ. ಗಾಯಾಳು ಒಳ್ಳೆಯ ಅರೋಗ್ಯವಂತರಾಗಿರುತ್ತಾರೆ ಎಂದರೆ ಸರಿಯಲ್ಲ. ಸುಳ್ಳು ನ್ಯೂನ್ಯತಾ ಪ್ರಮಾಣವನ್ನು ನಿರ್ದರಿಸಿದ್ದೇನೆ ಎಂದರೆ ಸರಿಯಲ್ಲ. ಗಾಯಾಳುವಿಗೆ ಹೆಚ್ಚಿನ ಪರಿಹಾರ ದೊರಕಿಸುವ ಸಲುವಾಗಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

*(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನವನ್ನು ಗಣಕೀಕರಣ ಮಾಡಲಾಯಿತು)*

ಓ ಹೇ ಕೇ ಸ ಓ

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫಸಿ
ಚನ್ನಪಟ್ಟಣ